154ನೇ ನಿ-330 = (98)

**<u>ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಬಲ್ಕೀಸ್ ಬಾನು ರವರು ನಿಯಮ 330 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಹೇಳಿಕೆ:</u>**

**<u>ಸೂಚನೆ:</u>**

ಸರ್ಕಾರದ ವಿವಿಧ ಆಯುಷ್ (ಆಯುರ್ವೇದ, ಯುನಾನಿ ಹಾಗೂ ಹೋಮಿಯೋಪಥಿ) ವೈದ್ಯಕೀಯ ಮಹಾವಿದ್ಯಾಲಯಗಳಲ್ಲಿ ಈ ಹಿಂದೆ 2011ನೇ ಸಾಲಿನಲ್ಲಿ ವಿಶೇಷ ನೇಮಕಾತಿ ನಿಯಮಾವಳಿಗಳನ್ನು ರಚಿಸಿ ಖಾಯಂಗೊಳಿಸಿರುವಂತೆ 2016 ನೇ ಸಾಲಿನಲ್ಲಿ ಗುತ್ತಿಗೆ ಆಧಾರದ ಮೇಲೆ ನೇಮಕಗೊಂಡು ಸತತವಾಗಿ ಸುಮಾರು 8 ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿರುವ ಸಹಾಯಕ ಪ್ರಾಧ್ಯಾಪಕರುಗಳ ಸೇವೆಯನ್ನು ಖಾಯಂಗೊಳಿಸುವ ಕುರಿತು.

**<u>ಹೇಳಿಕೆ:</u>**

ಆಯುಷ್ ಇಲಾಖೆಯಲ್ಲಿನ ಆಯುಷ್ ವೈದ್ಯಕೀಯ ಮಹಾ ವಿದ್ಯಾಲಯಗಳಲ್ಲಿ ಎನ್.ಸಿ.ಐ.ಎಸ್.ಎಂ/ ಎನ್.ಸಿ.ಹೆಚ್. ಮಾನದಂಡಗಳ ಪ್ರಕಾರ ಕಾಲೇಜುಗಳ ಮಾನ್ಯತೆ ಪಡೆಯಲು ಕನಿಷ್ಠ ಬೋಧಕ ವೃಂದದ ಅವಶ್ಯಕತೆ ಇರುತ್ತದೆ. ಅಲ್ಲದೇ ಬೋಧಕರ ಕೊರತೆ ಇರುವುದರಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಹಾಗೂ ಸಂಸ್ಥೆಯ ಹಿತದೃಷ್ಟಿಯಿಂದ ಗುತ್ತಿಗೆ/ ಕನ್ಸ್‌ಲ್ಟೆಂಟ್ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ ಸಹಾಯಕ ಪ್ರಾಧ್ಯಾಪಕರುಗಳ ಸೇವೆಯನ್ನು ಖಾಯಂಗೊಳಿಸುವ ಸಂಬಂಧದ ಪ್ರಸ್ತಾವನೆಯು ಆಯುಕ್ತರು, ಆಯುಷ್ ಇಲಾಖೆ ಇವರಿಂದ ಸ್ವೀಕೃತವಾಗಿದ್ದು, ಸರ್ಕಾರದ ಪರಿಶೀಲನೆಯಲ್ಲಿದೆ.

**ಸಂಖ್ಯೆ: ಆಕುಕ 328 ಪಿಟಿಡಿ 2024**

(ದಿನೇಶ್ ಗುಂಡೂರಾವ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು